**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್ ಭೋಜೇಗೌಡ, ಶ್ರೀ ಮಧು ಜಿ. ಶ್ರೀ ಮಾದೇಗೌಡ ಹಾಗೂ ಅ. ದೇವೇಗೌಡ ರವರುಗಳು ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.**

**ಪ್ರಶ್ನೆ**

**1995ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಬೋಧಕ / ಬೋಧಕೇತರರಿಗೆ ಸೇವಾ ಭದ್ರತೆ ಇಲ್ಲದಿರುವ ಹಾಗೂ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಸರ್ಕಾರದಿಂದ ಉಚಿತ ಸೌಲಭ್ಯ ದೊರೆಯದೆ ಇರುವುದರಿಂದ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.**

**ಉತ್ತರ**

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 59 ಪಿಎಂಸಿ 2006, ದಿನಾಂಕ:06/10/2007 ಮತ್ತು ಇಡಿ 217 ಪಿಎಂಸಿ 2008, ದಿನಾಂಕ:08/09/2008ರನ್ವಯ 1987-88 ರಿಂದ 1994-95ರ ಶೈಕ್ಷಣಿಕ ಅವಧಿಯಲ್ಲಿ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆಯಿಲ್ಲದೆ ಸತತವಾಗಿ ನಡೆಸಲಾಗುತ್ತಿರುವ ಕನ್ನಡ ಮಾಧ್ಯಮದ ಖಾಸಗಿ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಅವಕಾಶ ಕಲ್ಪಿಸಲಾಗಿದೆ.

1995ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ನೌಕರರು ಅನುದಾನ ರಹಿತವಾಗಿ ನೇಮಕಗೊಂಡ ನೌಕರರಾಗಿದ್ದು ಈ ನೌಕರರುಗಳಿಗೆ ಸರ್ಕಾರದಿಂದ ವೇತನಾನುದಾನ ನೀಡುತ್ತಿರುವುದಿಲ್ಲ. ಇವರುಗಳಿಗೆ ಆಡಳಿತ ಮಂಡಳಿಯ ಸಂಪನ್ಮೂಲದಿಂದ ವೇತನವನ್ನು ನೀಡಲಾಗುತ್ತಿದೆ. ಇವರುಗಳಿಗೆ ಶಾಲೆ ವೇತನಾನುದಾನಕ್ಕೆ ಒಳಪಟ್ಟ ನಂತರ ವೇತನ ಸೌಲಭ್ಯಗಳನ್ನು ನೀಡಲಾಗುತ್ತದೆ.

ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನ ರಹಿತ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ ಸೇವಾ ಷರತ್ತು ಮತ್ತು ನಿಯಮಗಳು] 2005ರ ನಿಯಮಗಳಂತೆ ಖಾಸಗಿ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಶಾಲೆಯ ಆಡಳಿತ ಮಂಡಳಿಗಳು ಕೆಳಕಂಡಂತೆ ಸೇವಾ ಭದ್ರತೆ / ಸೌಲಭ್ಯಗಳನ್ನು ಕಡ್ಡಾಯವಾಗಿ ಒದಗಿಸಬೇಕಾಗಿದೆ.

ಅ) ನಿಯಮ-3[ಬಿ] ರನ್ವಯ ಅನುದಾನರಹಿತ ಶಾಲೆಗಳಲ್ಲಿನ ಸಿಬ್ಬಂದಿಗಳಿಗೆ ವೇತನವನ್ನು ತತ್ಸಮಾನ ಸರ್ಕಾರಿ ಸೇವೆಯಲ್ಲಿನ ಸಿಬ್ಬಂದಿಗಳ ಕನಿಷ್ಠ ಮೂಲ ವೇತನಕ್ಕೆ ಸಮನಾದ ವೇತನವನ್ನು ನೀಡಬೇಕು.

ಆ) ನಿಯಮ-4ರನ್ವಯ ಅನುದಾನರಹಿತ ಶಾಲಾ ಸಿಬ್ಬಂದಿಗಳಿಗೆ ರಜಾ ಸೌಲಭ್ಯಗಳನ್ನು ನೀಡಬೇಕು.

ಇ) ನಿಯಮ-5ರನ್ವಯ ಅನುದಾನರಹಿತ ಶಾಲಾ ಸಿಬ್ಬಂದಿಗಳ ತಖ್ತೆ: ಹಾಗೂ ಸೇವಾ ಪುಸ್ತಕವನ್ನು ನಿರ್ವಹಿಸಬೇಕು.

ಈ)ನಿಯಮ-5ರನ್ವಯ ಅನುದಾನರಹಿತ ಶಾಲಾ ಸಿಬ್ಬಂದಿಗಳಿಂದ ಶಾಲೆಯ ಆಡಳಿತ ಮಂಡಳಿಯವರು ಒತ್ತಾಯ ಪೂರ್ವಕವಾಗಿ ದಿನಾಂಕ ನಮೂದಿಸದೇ ರಾಜೀನಾಮೆ ಪತ್ರವನ್ನು ಪಡೆಯತಕ್ಕದ್ದಲ್ಲ.

ಖಾಸಗಿ ಅನುದಾನರಹಿತ ಶಾಲೆ ಕಾಲೇಜುಗಳ ಸಿಬ್ಬಂದಿಗಳಿಗೆ ಆಡಳಿತ ಮಂಡಳಿಯವರು ಕರ್ನಾಟಕ ಶಿಕ್ಷಣ ಕಾಯಿದೆಯ-1983ರ ಸೆಕ್ಷನ್- 89 ಮತ್ತು 90 ರಲ್ಲಿ ಪ್ರಸ್ತಾಪಿಸಿರುವಂತೆ ಅಗತ್ಯ ಸೇವಾ ಸೌಲಭ್ಯಗಳನ್ನು ಒದಗಿಸದೇ ನಿಯಮಗಳನ್ನು ಉಲ್ಲಂಘಿಸಿದ ಶಾಲೆ ಕಾಲೇಜುಗಳ ವಿರುದ್ಧ ವಿಚಾರಣೆಯನ್ನು ನಡೆಸಿ ದಂಡ ವಿಧಿಸುವ ಅಧಿಕಾರವನ್ನು ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ (DERA)ಕ್ಕೆ ನೀಡಲಾಗಿದ್ದು, ಈ ಸಂಬಂಧ ಕರ್ನಾಟಕ ಶಿಕ್ಷಣ ಕಾಯಿದೆಗೆ ಕೆಳಕಂಡಂತೆ ತಿದ್ದುಪಡಿ ತಂದು ಹೊಸದಾಗಿ ಸೆಕ್ಷನ್-125 ಎ ಅನ್ನು ಸೇರ್ಪಡೆ ಮಾಡಲಾಗಿದ್ದು ವಿವರ ಕೆಳಕಂಡಂತಿದೆ.

"125A. Penalty for contravention of section 88, 89 and 90.- Any educational institution is found guilty of contravention of either of sections 88, 89 and 90 in an enquiry conducted, after giving an opportunity of being heard, by District Education Regulatory Authority, it shall impose a penalty which may extend to five lakh rupees."

ರಾಜ್ಯ ಎಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೇವಾ ಭದ್ರತೆಯನ್ನು ಒದಗಿಸದ ಶಾಲೆ ಕಾಲೇಜುಗಳ ಆಡಳಿತ ಮಂಡಳಿಗಳ ವಿರುದ್ಧ ಕರ್ನಾಟಕ ಶಿಕ್ಷಣ ಕಾಯಿದೆ ಸೆಕ್ಷನ್-125[ಎ] ರಂತೆ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ(DERA)ದಲ್ಲಿ ಪ್ರಕರಣ ದಾಖಲಿಸಿ ನಿಯಮಾನುಸಾರ ಕ್ರಮಕೈಗೊಳ್ಳುವಂತೆ ದಿನಾಂಕ:31.08.2016. 11.01.2017. 09.10.2017 ಮತ್ತು 16.12.2019ರನ್ವಯ ಸುತ್ತೋಲೆ ಹೊರಡಿಸಲಾಗಿದೆ. ಮುಂದುವರೆದು ಸರ್ಕಾರದ ಆದೇಶಗಳನ್ನು ಅನುಷ್ಠಾನಗೊಳಿಸದೆ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ದೂರುಗಳು ಕಂಡು ಬಂದಲ್ಲಿ ನಿಯಮಾನುಸಾರ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರವು(DERA) ಕ್ರಮ ವಹಿಸಲಾಗುತ್ತದೆ.

ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ ಮತ್ತು ಬಿಸಿ ಊಟ ಸೌಲಭ್ಯವನ್ನು ನೀಡಲಾಗುತ್ತಿದೆ. ಅನುದಾನ ರಹಿತ ಖಾಸಗಿ ಶಾಲೆಗಳ ವಿದ್ಯಾರ್ಥಿಗಳಿಗೆ ಈ ಉಚಿತ ಸೌಲಭ್ಯವನ್ನು ನೀಡಲಾಗುತ್ತಿಲ್ಲ.

**ಇಪಿ 60 ಎಲ್‌ಬಿಪಿ 2024**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**